# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 560
2. ಸದಸ್ಯರ ಹೆಸರು : ಶ್ರೀ ಹೆಚ್. ಪಿ. ಸುಧಾಮ್ ದಾಸ್ (ನಾಮನಿರ್ದೇಶನ ಹೊಂದಿದವರು)
3. ಉತ್ತರಿಸಬೇಕಾದ ದಿನಾಂಕ : 11.12.2025.
4. ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಪರಿಶಿಷ್ಟ ಪಂಗಡಗಳಿಗೆ ಸೇರಿದ ವ್ಯಕ್ತಿಗಳಿಗೆ ಮೀಸಲಾದ ಭರ್ತಿ ಮಾಡದ ಖಾಲಿ ಹುದ್ದೆಗಳು) (ವಿಶೇಷ ನೇಮಕಾತಿ) ನಿಯಮಗಳು, 2001ರ ಅನ್ವಯ ಬ್ಯಾಕ್‌ಲಾಗ್ ಸಚಿವ ಸಂಪುಟ ಉಪಸಮಿತಿ ಹಾಗೂ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯ ಉಪಸಮಿತಿಯು ಈಗಾಗಲೇ ಮಂಜೂರಾಗಿರುವ ಹುದ್ದೆಗಳ ಎದುರಾಗಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಪುನಃ ಆರ್ಥಿಕ ಇಲಾಖೆಯ ಅನುಮೋದನೆ ಪಡೆಯುವ ಅವಶ್ಯಕತೆ ಇರುವುದಿಲ್ಲವೆಂದು ತಿಳಿಸಲಾಗಿದ್ದರೂ ಉನ್ನತ ಶಿಕ್ಷಣ ಇಲಾಖೆ ಒಳಗೊಂಡಂತೆ ಎಷ್ಟು ಪ್ರಸ್ತಾವನೆ ಕಳುಹಿಸಲಾಗಿದಿಯೇ; | ಕರ್ನಾಟಕ ಸರ್ಕಾರದ (ಕಾರ್ಯ ಕಲಾಪಗಳ ನಿರ್ವಹಣೆ) ನಿಯಮಗಳು -1977 ರ ಅನ್ವಯ ಹುದ್ದೆಗಳ ಸೃಜನೆ ಅಥವಾ ಹುದ್ದೆಗಳ ಸಂಖ್ಯೆ ಹೆಚ್ಚಿಸುವ ಅಂಶಗಳನ್ನು ಒಳಗೊಂಡ ಯಾವುದೇ ಪ್ರಸ್ತಾವನೆ / ಯೋಜನೆ ಕುರಿತು ಆದೇಶಗಳನ್ನು ಹೊರಡಿಸುವ ಪೂರ್ವದಲ್ಲಿಯೇ ಆರ್ಥಿಕ ಇಲಾಖೆಯ ಸಹಮತಿ ಪಡೆಯುವುದು ಕಡ್ಡಾಯವಾಗಿದ್ದರೂ ಸಹ, ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿಗೆ ಸಡಿಲಿಕೆ ನೀಡಿ, ಆರ್ಥಿಕ ಇಲಾಖೆಯಿಂದ ಸಹಮತಿ ಪಡೆದು ಸೃಜಿಸಲಾದ ಹುದ್ದೆಗಳ ಪೈಕಿ ಬ್ಯಾಕ್‌ಲಾಗ್ ಹುದ್ದೆಗಳೆಂದು ಗುರುತಿಸಲ್ಪಟ್ಟ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಯು ಸುತ್ತೋಲೆ ಆಇ 02 ಬಿಇಎಂ 2021 ದಿನಾಂಕ: 04.07.2022 ಹಾಗೂ ಆಇ 02 ಬಿಇಎಂ 2024 ದಿನಾಂಕ: 07.06.2024 ಗಳಲ್ಲಿ ನೀಡಿರುವ ಸೂಚನೆಗಳನ್ವಯ ಆಡಳಿತ ಇಲಾಖೆಯ ಹಂತಗಳಲ್ಲಿಯೇ ಕ್ರಮಕೈಗೊಳ್ಳಲು ಅವಕಾಶ ಮಾಡಿಕೊಡಲಾಗಿದೆ.<br><br>ಬ್ಯಾಕ್ ಲಾಗ್ ಹುದ್ದೆಗಳಿಗೆ ಸಂಬಂದಧಿಸಿದಂತೆ ಆರ್ಥಿಕ ಇಲಾಖೆಯಲ್ಲಿ ಯಾವುದೇ ಪ್ರಸ್ತಾವನೆ ಭಾಕಿ ಇರುವುದಿಲ್ಲ. |
| ಆ | ಇದ್ದಲ್ಲಿ, ಇಂತಹ ಎಷ್ಟು ಪ್ರಸ್ತಾವನೆಗಳು ಅನುಮೋದನೆಯೊಂದಗೆ ಆಯಾ ಇಲಾಖೆಗಳಿಗೆ ಹಿಂದಿರುಗಿಸಲಾಗಿವೆ ಹಾಗೂ ಎಷ್ಟು ಪ್ರಸ್ತಾವನೆಗಳು ನೆನೆಗುದಿಗೆ ಬಿದ್ದಿವೆ? (ಇಲಾಖಾವಾರು ಹುದ್ದೆಗಳ ವಿವರ ಒದಗಿಸುವುದು); | |

ಸಂಖ್ಯೆ: ಆಇ 147 ಬಿಜಿಎಲ್ 2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ